# ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತ

**D. DEVARAJ URS BACKWARD CLASSES DEVELOPMENT CORPORATION**

(ಕರ್ನಾಟಕ ಸರ್ಕಾರದ ಉದ್ಯಮ) (A Government of Karnataka Undertaking)


ಕ್ರಮಾಂಕ / No. : ದಿನಾಂಕ : / Dated :

ಸಂಖ್ಯೆ: ದೇಹಿನಿ/ಲೆವಿ/ಹೊ.ಯೋ/ಸಿಆರ್–01/2020–21 ದಿನಾಂಕ:12/11/2020

## ಪ್ರಕಟಣೆ

ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ 2020–21ನೇ ಸಾಲಿಗೆ **"ಇ–ವಾಣಿಜ್ಯ ಸಂಸ್ಥೆಗಳಾದ Zomato, Swiggy, Uber ets, Amazon ಮೊದಲಾದ ಸಂಸ್ಥೆಗಳಲ್ಲಿ ಉದ್ಯೋಗ ಪಡೆದು, ಮನೆಬಾಗಿಲಿಗೆ ಉತ್ಪನ್ನ ತಲುಪಿಸುತ್ತಿರುವ ಹಿಂದುಳಿದ ವರ್ಗಗಳಿಗೆ ಸೇರಿದ ಪ್ರವರ್ಗ–1, ಪ್ರವರ್ಗ–2ಎ, 3ಎ ಮತ್ತು 3ಬಿಗೆ ಸೇರಿದ (ವಿಶ್ವಕರ್ಮ, ಉಪ್ಪಾರ, ಅಂಬಿಗ, ಮಡಿವಾಳ, ಸವಿತಾ, ಅಲೆಮಾರಿ/ಅರೆ ಅಲೆಮಾರಿ ಜನಾಂಗದವರು ಹಾಗೂ ಮತೀಯ ಅಲ್ಪಸಂಖ್ಯಾತರನ್ನು ಹೊರತು ಪಡಿಸಿ) ಯುವಕರಿಗೆ ಬೈಕ್ ಕೊಂಡುಕೊಳ್ಳಲು ನಿಗಮದಿಂದ ರೂ.25000/–ಗಳ ಸಹಾಯ ಧನ"** ಹಾಗೂ ಉಳಿಕೆ ಮೊತ್ತ ಬ್ಯಾಂಕ್ ಅಥವಾ ಆರ್ಥಿಕ ಸಂಸ್ಥೆಗಳ ಮೂಲಕ ಸಾಲ ಪಡೆಯುವುದು. ಈ ಸೌಲಭ್ಯ ಪಡೆಯ ಬಯಸುವವರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

**ಒಂದು ಬಾರಿ ನಿಗಮದ ಯಾವುದಾದರೂ ಯೋಜನೆಯಲ್ಲಿ ಪ್ರಯೋಜನ ಪಡೆದಿದ್ದಲ್ಲಿ ಅಂತಹವರು ಹಾಗೂ ಅವರ ಕುಟುಂಬದವರು ಮತ್ತೊಮ್ಮೆ ಸೌಲಭ್ಯ ಕೋರಿ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ. ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.**

ಮೇಲ್ಕಂಡ ಸೌಲಭ್ಯಗಳನ್ನು ಪಡೆಯಲು ಇಚ್ಚಿಸುವ ಹಿಂದುಳಿದ ವರ್ಗದ ಫಲಾಪೇಕ್ಷಿಗಳು, ಅವರು ವಾಸಿಸುತ್ತಿರುವ ಆಯಾ ಜಿಲ್ಲೆಯ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರ ಕಛೇರಿಯಲ್ಲಿ ಉಚಿತ ಅರ್ಜಿಗಳನ್ನು ಪಡೆಯುವುದು. ಅಲ್ಲದೆ ನಿಗಮದ ವೆಬ್ ಸೈಟ್ www.dbcdc.karnataka.gov.in ಇಲ್ಲಿ ಪಡೆಯಬಹುದಾಗಿರುತ್ತದೆ. *ಭರ್ತಿ ಮಾಡಿದ ಅರ್ಜಿಗಳನ್ನು ಅಗತ್ಯ/ದಾಖಲಾತಿಗಳೊಂದಿಗೆ* ಅನ್ ಲೈನ್ ಅಥವಾ ಆಫ್ ಲೈನ್ ಮೂಲಕ *ದಿನಾಂಕ:19/12/2020 ರೊಳಗೆ ಸಲ್ಲಿಸುವುದು.* ದಿನಾಂಕ:19/12/2020ರ ನಂತರ ಬರುವ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ನಿಗಮದ ವೆಬ್ ಸೈಟ್:www.dbcdc.karnataka.gov.in ಹಾಗೂ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಜಿಲ್ಲಾ ಕಛೇರಿಯನ್ನು ಸಂಪರ್ಕಿಸುವುದು.

ವ್ಯವಸ್ಥಾಪಕ ನಿರ್ದೇಶಕರು.

**ಪ್ರತಿಯನ್ನು:**

1. ಸರ್ಕಾರದ ಮಾನ್ಯ ಅಪರ ಮುಖ್ಯ ಕಾರ್ಯದರ್ಶಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಅಧ್ಯಕ್ಷರು, ಡಿ.ಬಿ.ಸಿ.ಡಿ.ಸಿ ಇವರ ಆಪ್ತ ಕಾರ್ಯದರ್ಶಿಯವರಿಗೆ ಮಾಹಿತಿಗಾಗಿ ಹಾಗೂ ಮಾನ್ಯರ ಅವಗಾಹನೆಗೆ ತರುವಂತೆ ಕೋರಿದೆ.
2. ಎಲ್ಲಾ ಸಹಾಯಕ ಪ್ರಧಾನ ವ್ಯವಸ್ಥಾಪಕರು/ವಿಭಾಗೀಯ ವ್ಯವಸ್ಥಾಪಕರು, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ಇವರಿಗೆ ಮಾಹಿತಿಗೆ ಹಾಗೂ ಸೂಕ್ತ ಕ್ರಮಕ್ಕಾಗಿ.
3. ಎಲ್ಲಾ ಜಿಲ್ಲಾ ವ್ಯವಸ್ಥಾಪಕರು, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ಇವರಿಗೆ ಮಾಹಿತಿಗೆ ಹಾಗೂ ಸೂಕ್ತ ಕ್ರಮಕ್ಕಾಗಿ.
4. ನಿಗಮದ ಕೇಂದ್ರ ಕಛೇರಿ ಎಲ್ಲಾ ಅಧಿಕಾರಿ/ಸಿಬ್ಬಂದಿಯವರಿಗೆ ಮಾಹಿತಿಗಾಗಿ.
5. ಕೇಂದ್ರ ಕಛೇರಿ ವೆಬ್‌ಸೈಟ್ ನಿರ್ವಾಹಕರಿಗೆ ಮಾಹಿತಿಗಾಗಿ ಹಾಗೂ ನಿಗಮದ ವೆಬ್ ಸೈಟ್‌ನಲ್ಲಿ ಅಪ್‌ಲೋಡ್ ಮಾಡುವ ಸಲುವಾಗಿ.
6. ನಿಗಮದ ಸೂಚನಾ ಫಲಕಕ್ಕೆ.
7. ಕಛೇರಿ ಪ್ರತಿ.


ನಂ. 16–ಡಿ, 4ನೇ ಮಹಡಿ, ದೇವರಾಜ ಅರಸು ಭವನ, ಮಿಲ್ಲರ್ಸ್ ಟ್ಯಾಂಕ್ ಬಂಡ್ ಏರಿಯಾ, ವಸಂತನಗರ, ಬೆಂಗಳೂರು–52. # 16-D, 4th Floor, Devaraj Urs Bhavan, Millers Tank Bund Area, Vasanthanagar, Bangalore-52.
Ph. : 080 - 22374832, 22374834 Fax : 080 - 22374833, E-mail : md.dbcdc@gmail.com, Visit at : www.karnataka.gov.in/dbcdc